All India Radio: Bangalore
National Bulletin In Kannada
27.10.2025 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

1. ೨೧ನೇ ಶತಮಾನ ಭಾರತ, ಆಸಿಯಾನ್ ಶತಮಾನವಾಗಿದೆ ; ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದನೆ
2. ಆಸಿಯಾನ್ ಶೃಂಗಸಭೆ ನೇಪಥ್ಯದಲ್ಲಿ ವಿಶ್ವ ನಾಯಕರೊಂದಿಗೆ ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಚರ್ಚೆ
3. ಮಾರಿಷಸ್ ಪ್ರಧಾನಿಯೊಂದಿಗೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ದ್ವಿಪಕ್ಷೀಯ ಮಾತುಕತೆ
4. ಮುಂಬೈನಲ್ಲಿಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಂದ ಭಾರತ ಕಡಲ ಸಪ್ತಾಹ-೨೦೨೫ ಉದ್ಘಾಟನೆ

<><><><>

೨೧ನೇ ಶತಮಾನವು ಭಾರತ ಮತ್ತು ಆಸಿಯಾನ್‌ನ ಶತಮಾನವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಮಲೇಷ್ಯಾದಲ್ಲಿ ನಡೆಯುತ್ತಿರುವ ಆಸಿಯಾನ್-ಭಾರತ ಶೃಂಗಸಭೆಯನ್ನು ವರ್ಚುವಲ್ ಆಗಿ ಉದ್ದೇಶಿಸಿ ಮಾತನಾಡಿದ ಅವರು, ಭಾರತ ಮತ್ತು ಆಸಿಯಾನ್ ಒಟ್ಟಾಗಿ ವಿಶ್ವದ ಜನಸಂಖ್ಯೆಯ ಕಾಲು ಭಾಗದಷ್ಟು ಪ್ರತಿನಿಧಿಸುತ್ತವೆ ಎಂದು ತಿಳಿಸಿದರು. ಭಾರತ ಮತ್ತು ಆಸಿಯಾನ್ ಆಳವಾದ ಐತಿಹಾಸಿಕ ಸಂಬಂಧಗಳು ಮತ್ತು ಹಂಚಿಕೆಯ ಮೌಲ್ಯಗಳಿಂದ ಸಂಪರ್ಕ ಹೊಂದಿವೆ ಎಂದರು. ಅನಿಶ್ಚಿತತೆಯ ಈ ಯುಗದಲ್ಲಿಯೂ ಸಹ, ಭಾರತ-ಆಸಿಯಾನ್ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯು ನಿರಂತರ ಪ್ರಗತಿಯನ್ನು ಕಂಡಿದೆ. ಈ ಬಲವಾದ ಪಾಲುದಾರಿಕೆ ಜಾಗತಿಕ ಸ್ಥಿರತೆ ಮತ್ತು ಅಭಿವೃದ್ಧಿಗೆ ಬಲವಾದ ಅಡಿಪಾಯವಾಗಿ ಹೊರಹೊಮ್ಮುತ್ತಿದೆ ಎಂದು ಪ್ರಧಾನಿ ಮೋದಿ ಹೇಳಿದರು. ಪ್ರತಿಯೊಂದು ವಿಪತ್ತಿನಲ್ಲಿಯೂ ಭಾರತ ತನ್ನ ಆಸಿಯಾನ್ ಸ್ನೇಹಿತರೊಂದಿಗೆ ದೃಢವಾಗಿ ನಿಂತಿದೆ. ಕಡಲ ಭದ್ರತೆ

ಮತ್ತು ಕಡಲ ಆರ್ಥಿಕತೆಯಲ್ಲಿ ಸಹಕಾರವು ವೇಗವಾಗಿ ಬೆಳೆಯುತ್ತಿದೆ ಎಂದ ಅವರು, ೨೦೨೬ ಅನ್ನು 'ಆಸಿಯಾನ್-ಭಾರತ ಕಡಲ ಸಹಕಾರ ವರ್ಷ' ಎಂದು ಪ್ರಧಾನಿ ಮೋದಿ ಘೋಷಿಸಿದರು.

ಧ್ವನಿ : ಪ್ರಧಾನಿ ಮೋದಿ

<><><>

ಆಸಿಯಾನ್ ಶೃಂಗಸಭೆ-೨೦೨೫ ರ ನೇಪಥ್ಯದಲ್ಲಿ ಹಲವಾರು ವಿಶ್ವ ನಾಯಕರನ್ನು ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಭೇಟಿಯಾಗಿ, ಮಾತುಕತೆ ನಡೆಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಈ ವಿಷಯ ಹಂಚಿಕೊಂಡಿರುವ ಅವರು, ಮಲೇಷ್ಯಾ ಪ್ರಧಾನಿ ಅನ್ವರ್ ಇಬ್ರಾಹಿಂ ಅವರೊಂದಿಗಿನ ಭೇಟಿಯ ಸಂದರ್ಭದಲ್ಲಿ, ಯಶಸ್ವಿ ಆಸಿಯಾನ್ ಶೃಂಗಸಭೆಗೆ ಶುಭಾಶಯಗಳನ್ನು ಕೋರಲಾಗಿದೆ. ಭಾರತ-ಮಲೇಷ್ಯಾ ನಡುವಿನ ದ್ವಿಪಕ್ಷೀಯ ಸಹಕಾರ ಮತ್ತು ಜನರಿಂದ ಜನರ ನಡುವಿನ ಸಂಪರ್ಕವನ್ನು ಬಲಪಡಿಸುವ ಕುರಿತು ಇಬ್ರಾಹಿಂ ಅವರ ಆಲೋಚನೆಗಳು ಮೌಲ್ಯಯುತವಾಗಿವೆ ಎಂದು ಹೇಳಿದ್ದಾರೆ. ಸಿಂಗಾಪುರ ವಿದೇಶಾಂಗ ಸಚಿವ ವಿವಿಯನ್ ಬಾಲಕೃಷ್ಣನ್ ಅವರನ್ನು ಭೇಟಿಯಾದ ಡಾ. ಜೈಶಂಕರ್, ಜಾಗತಿಕ ಮತ್ತು ಪ್ರಾದೇಶಿಕ ಸನ್ನಿವೇಶಗಳ ಕುರಿತು ಹಾಗೂ ಭಾರತ-ಸಿಂಗಾಪುರ ಸಹಕಾರವನ್ನು ಬಲಪಡಿಸುವ ಅವಕಾಶಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು ಎಂದು ತಿಳಿಸಿದ್ದಾರೆ. ಇದೇ ವೇಳೆ ಥೈಲ್ಯಾಂಡ್ ವಿದೇಶಾಂಗ ಸಚಿವ ಸಿಹಾಸಕ್ ಫುವಾಂಗ್ಕೆಟ್ಕಿಯೊ ಅವರನ್ನು ಸಹ ಸಚಿವ ಡಾ. ಎಸ್. ಜೈಶಂಕರ್ ಭೇಟಿಯಾದರು. ಎರಡೂ ದೇಶಗಳ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸಲು, ಅವರೊಂದಿಗೆ ಒಟ್ಟಾಗಿ ಕೆಲಸ ಮಾಡಲು ಎದುರು ನೋಡುತ್ತಿರುವುದಾಗಿ ಹೇಳಿದ್ದಾರೆ. ಶೃಂಗಸಭೆಯಲ್ಲಿ ಕೊರಿಯಾ ಗಣರಾಜ್ಯದ ವಿದೇಶಾಂಗ ಸಚಿವ ಚೋ ಹ್ಯುನ್ ಅವರನ್ನು ಭೇಟಿಯಾಗಿ, ಆಟೋಮೋಟಿವ್, ಎಲೆಕ್ಟ್ರಾನಿಕ್ಸ್, ಸೆಮಿಕಂಡಕ್ಟರ್, ರಕ್ಷಣಾ ಮತ್ತು ಹಡಗು ನಿರ್ಮಾಣದಲ್ಲಿ ಸಹಕಾರದ ಕುರಿತು ಚರ್ಚಿಸಲಾಯಿತು ಎಂದು ಸಾಮಾಜಿಕ ಮಾಧ್ಯಮದಲ್ಲಿ ಡಾ. ಎಸ್. ಜೈಶಂಕರ್ ತಿಳಿಸಿದ್ದಾರೆ.

<><><>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಸೀಶೆಲ್ಸ್‌ನಲ್ಲಿ ನಡೆದ ನೂತನ ಅಧ್ಯಕ್ಷ ಡಾ. ಪ್ಯಾಟ್ರಿಕ್ ಹರ್ಮಿನಿ ಅವರ ಪ್ರಮಾಣವಚನ ಸಮಾರಂಭದಲ್ಲಿ ಭಾಗವಹಿಸಿದ್ದರು. ಎರಡು ದಿನಗಳ ಸೀಶೆಲ್ಸ್ ಭೇಟಿಯಲ್ಲಿರುವ ರಾಧಾಕೃಷ್ಣನ್ ಅವರು ಸೀಶೆಲ್ಸ್‌ನಲ್ಲಿ ಮಾರಿಷಸ್ ಪ್ರಧಾನಿ ಡಾ.

ನವೀನ್ ಚಂದ್ರ ರಾಮ್ಗೂಲಂ ಅವರನ್ನು ಭೇಟಿಯಾಗಿ, ದ್ವಿಪಕ್ಷೀಯ ಮಾತುಕತೆ ನಡೆಸಿದರು. ಸಭೆಯಲ್ಲಿ, ಭಾರತ ಮತ್ತು ಮಾರಿಷಸ್‌ನ ಇತಿಹಾಸ ಮತ್ತು ಸಂಸ್ಕೃತಿಯಲ್ಲಿ ಬೇರೂರಿರುವ ಬಲವಾದ ಮತ್ತು ಶಾಶ್ವತವಾದ ಬಾಂಧವ್ಯದ ಬಗ್ಗೆ ಉಭಯ ನಾಯಕರು ಚರ್ಚಿಸಿದರು. ಭಾರತ-ಮಾರಿಷಸ್ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ಮಾರ್ಗಗಳನ್ನು ಸಹ ಚರ್ಚಿಸಲಾಯಿತು. ನಂತರ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಸೀಶೆಲ್ಸ್‌ನಲ್ಲಿರುವ ಭಾರತೀಯ ಸಮುದಾಯವನ್ನು ಉದ್ದೇಶಿಸಿ ಮಾತನಾಡಿದರು. ಜಾಗತಿಕ ದಕ್ಷಿಣದ ಆದ್ಯತೆಗಳನ್ನು ಮತ್ತಷ್ಟು ಹೆಚ್ಚಿಸುವ ಮೂಲಕ, ಪ್ರದೇಶಗಳಾದ್ಯಂತ ಭದ್ರತೆ ಹಾಗೂ ಬೆಳವಣಿಗೆಗೆ ಪರಸ್ಪರ ಮತ್ತು ಸಮಗ್ರ ಪ್ರಗತಿ, ಮಹಾಸಾಗರದ ದೃಷ್ಟಿಕೋನವನ್ನು ಮುನ್ನಡೆಸುವಲ್ಲಿ ಸೀಶೆಲ್ಸ್ ಪ್ರಮುಖ ಪಾಲುದಾರ ರಾಷ್ಟ್ರವಾಗಿ ಉಳಿದಿದೆ ಎಂದು ಹೇಳಿದರು. ಈ ಉಪಕ್ರಮವು ಮುಕ್ತ ಮತ್ತು ಸುರಕ್ಷಿತ ಹಿಂದೂ ಮಹಾಸಾಗರವನ್ನು ಖಚಿತಪಡಿಸಿಕೊಳ್ಳಲು ಭಾರತದ ಹಂಚಿಕೆಯ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹೇಳಿದರು.

ಧ್ವನಿ : ಉಪರಾಷ್ಟ್ರಪತಿ

<><><><>

ಮುಂಬೈನಲ್ಲಿನಲ್ಲಿಂದು ಭಾರತ ಕಡಲ ಸಪ್ತಾಹ-೨೦೨೫ ಅನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಉದ್ಘಾಟಿಸಲಿದ್ದಾರೆ. ಬಂದರುಗಳು, ಹಡಗು ಸಾಗಣೆ ಮತ್ತು ಜಲಮಾರ್ಗಗಳ ಸಚಿವಾಲಯ, ಭಾರತೀಯ ಬಂದರು ಸಂಘದ ಸಹಭಾಗಿತ್ವದಲ್ಲಿ ಆಯೋಜಿಸಿರುವ ಐದು ದಿನಗಳ ಈ ಕಾರ್ಯಕ್ರಮ, ಸುಸ್ಥಿರ ಕಡಲ ಬೆಳವಣಿಗೆ, ವ್ಯಾಪಾರ ವಿಸ್ತರಣೆ ಮತ್ತು ಕಡಲ ಆರ್ಥಿಕ ಅಭಿವೃದ್ಧಿಗಾಗಿ ಭಾರತದ ದೃಷ್ಟಿಕೋನವನ್ನು ಪ್ರದರ್ಶಿಸುತ್ತದೆ. ಈ ಕಾರ್ಯಕ್ರಮದಲ್ಲಿ ಭಾರತ ಮತ್ತು ವಿದೇಶಗಳಿಂದ ಕಡಲ ಉದ್ಯಮದ ನಾಯಕರು, ನೀತಿ ನಿರೂಪಕರು, ಹೂಡಿಕೆದಾರರು, ನಾವೀನ್ಯಕಾರರು ಮತ್ತು ಪಾಲುದಾರರು ಭಾಗವಹಿಸಲಿದ್ದಾರೆ. ಭಾರತ ಕಡಲ ಸಪ್ತಾಹ-೨೦೨೫ ಪ್ರದರ್ಶನಗಳು, ಚರ್ಚೆಗಳು ಮತ್ತು ಸಂವಾದಾತ್ಮಕ ಅಧಿವೇಶನಗಳನ್ನು ಒಳಗೊಂಡಿರುತ್ತದೆ. ಬಂದರುಗಳು, ಸಾಗಣೆ, ಲಾಜಿಸ್ಟಿಕ್ಸ್ ಮತ್ತು ಕಡಲ ತಂತ್ರಜ್ಞಾನದಲ್ಲಿನ ಅವಕಾಶಗಳನ್ನು ಪ್ರತಿಬಿಂಬಿಸುವ ಕಾರ್ಯಕ್ರಮ ಇದಾಗಲಿದೆ. ಜಾಗತಿಕ ಕಡಲ ಕೇಂದ್ರವಾಗಿ ಭಾರತದ ಸ್ಥಾನವನ್ನು

ಬಲಪಡಿಸುವುದು ಮತ್ತು ವಲಯದಾದ್ಯಂತ ಸಹಯೋಗ, ನಾವೀನ್ಯತೆ ಮತ್ತು ನೀತಿ ಸಂವಾದವನ್ನು ಉತ್ತೇಜಿಸುವ ಗುರಿಯನ್ನು ಈ ಕಾರ್ಯಕ್ರಮ ಹೊಂದಿದೆ.

<><><><>

ದೇಶಾದ್ಯಂತ ನಡೆಯುತ್ತಿರುವ ನಾಲ್ಕು ದಿನಗಳ ಛಠ್ ಪೂಜಾಚರಣೆಯಲ್ಲಿ ಇಂದು ಮೂರನೇ ಮತ್ತು ಮುಖ್ಯ ದಿನವಾಗಿದೆ. ಇದನ್ನು ಸಂಧ್ಯಾ ಅರ್ಘ್ಯ ಎಂದು ಕರೆಯಲಾಗುತ್ತದೆ. ಸಂಧ್ಯಾ ಅರ್ಘ್ಯವನ್ನು ಸೂರ್ಯ ಮುಳುಗುವ ವೇಳೆಗೆ ಸಮರ್ಪಿಸಲಾಗುವುದು. ಈ ಪವಿತ್ರ ಕ್ಷಣವು ಸೂರ್ಯ ದಿನವಿಡೀ ಒದಗಿಸುವ ಬೆಳಕು, ಉಷ್ಣತೆ ಮತ್ತು ಶಕ್ತಿಗೆ ಕೃತಜ್ಞತೆಯನ್ನು ಸೂಚಿಸುತ್ತದೆ. ಈ ದಿನದಂದು, ಕುಟುಂಬಗಳು ನದಿ ದಂಡೆಗಳಲ್ಲಿ ಅಥವಾ ಜಲಮೂಲಗಳಲ್ಲಿ ಒಟ್ಟುಗೂಡುತ್ತಾರೆ, ಥೇಕುವಾ ಎಂಬ ಸಿಹಿ ಖಾದ್ಯ, ಕಬ್ಬು, ಹಣ್ಣುಗಳು ಮತ್ತು ದೀಪಗಳನ್ನು ಬಿದಿರಿನ ಬುಟ್ಟಿಯಲ್ಲಿ ಹೊತ್ತುಕೊಂಡು ಹೋಗಿ ಪೂಜೆ ಸಲ್ಲಿಸುವ ಸಂಪ್ರದಾಯವಿದೆ. ಭಕ್ತರು ನೀರಿನಲ್ಲಿ ಮುಳುಗಿ, ಅಸ್ತಮಿಸುವ ಸೂರ್ಯನಿಗೆ ಅರ್ಘ್ಯವನ್ನು ಅರ್ಪಿಸುತ್ತಾರೆ, ಈ ಪೂಜೆಯ ಮೂಲಕ ತಮ್ಮ ಮಕ್ಕಳು ಮತ್ತು ಕುಟುಂಬದ ಸಮೃದ್ಧಿ ಮತ್ತು ಯೋಗಕ್ಷೇಮಕ್ಕಾಗಿ ಪ್ರಾರ್ಥಿಸುತ್ತಾರೆ. ಛಠ್ ಪೂಜಾ ಹಬ್ಬದ ಅಂಗವಾಗಿ ದೇಶದ ಜನತೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಶುಭ ಹಾರೈಸಿದ್ದಾರೆ.

<><><><>

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಇಂದಿನಿಂದ ಬೆಲ್ಜಿಯಂನ ಬ್ರುಜೆಲ್ಸ್‌ಗೆ ಎರಡು ದಿನಗಳ ಭೇಟಿ ನೀಡಲಿದ್ದಾರೆ. ಐರೋಪ್ಯ ಒಕ್ಕೂಟದ ಕಾರ್ಯನಿರ್ವಾಹಕ ಉಪಾಧ್ಯಕ್ಷ ಮತ್ತು ಐರೋಪ್ಯ ವಾಣಿಜ್ಯ ಆಯುಕ್ತ ಮಾರೋಸ್ ಸೆಫ್ಕೋವಿಕ್ ಅವರೊಂದಿಗೆ ಉನ್ನತಮಟ್ಟದ ಸಂವಾದ ನಡೆಸಲಿದ್ದಾರೆ. ಸಮಗ್ರ, ಸಮತೋಲಿತ ಮತ್ತು ಪರಸ್ಪರ ಪ್ರಯೋಜನಕಾರಿ ವ್ಯಾಪಾರ ಒಪ್ಪಂದವನ್ನು ಮಾಡಿಕೊಳ್ಳಲು ಎರಡೂ ಕಡೆಯವರು ಪ್ರಯತ್ನಗಳನ್ನು ತೀವ್ರಗೊಳಿಸಿದ್ದಾರೆ. ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದ ಮಾತುಕತೆಗಳಲ್ಲಿ ಈ ಭೇಟಿ ನಿರ್ಣಾಯಕ ಹಂತದಲ್ಲಿದೆ.

<><><><>

ಮೊಂತಾ ಚಂಡಮಾರುತದ ಹಿನ್ನೆಲೆಯಲ್ಲಿ, ಕರ್ನಾಟಕದ ಕರಾವಳಿ, ಆಂಧ್ರಪ್ರದೇಶದ ಕರಾವಳಿ, ತಮಿಳುನಾಡು, ಪುದುಚೇರಿ, ರಾಯಲಸೀಮಾ, ಒಡಿಶಾ, ಪೂರ್ವ ರಾಜಸ್ಥಾನ, ಗುಜರಾತ್, ಕೇರಳ, ಮಾಹೆ ಮತ್ತು ಕಾರೈಕಲ್‌ನಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ

ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ತಮಿಳುನಾಡು, ಆಂಧ್ರಪ್ರದೇಶ, ಯಾನಂ ಮತ್ತು ಒಡಿಶಾ ಕರಾವಳಿ ವ್ಯಾಪ್ತಿಯಲ್ಲಿ ಮತ್ತು ಬಂಗಾಳಕೊಲ್ಲಿಯಲ್ಲಿ ಬುಧವಾರದವರೆಗೆ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಹವಾಮಾನ ಇಲಾಖೆ ಎಚ್ಚರಿಸಿದೆ.

<><><><>

ಚೀನಾದ ಚೆಂಗ್ಡುವಿನಲ್ಲಿ ನಡೆದ ೨೦೨೫ ರ ಬ್ಯಾಡ್ಮಿಂಟನ್ ಏಷ್ಯಾ ೧೭ ಮತ್ತು ೧೫ ವರ್ಷದೊಳಗಿನ ಚಾಂಪಿಯನ್‌ಶಿಪ್‌ಗಳ ಬಾಲಕಿಯರ ಸಿಂಗಲ್ಸ್ ಸ್ಪರ್ಧೆಗಳಲ್ಲಿ ಭಾರತ ಎರಡು ಚಿನ್ನದ ಪದಕಗಳನ್ನು ಗೆದ್ದಿದೆ. ೧೫ ವರ್ಷದೊಳಗಿನವರ ಬಾಲಕಿಯರ ಸಿಂಗಲ್ಸ್ ಬ್ಯಾಡ್ಮಿಂಟನ್ ಫೈನಲ್‌ನಲ್ಲಿ, ಶೈನಾ ಮಣಿಮುತ್ತು, ಜಪಾನ್‌ನ ಚಿಹರು ಟೊಮಿಟಾ ಅವರನ್ನು ೨೧-೧೪, ೨೨-೨೦ ಸೆಟ್‌ಗಳಿಂದ ಸೋಲಿಸಿದರು. ೧೭ ವರ್ಷದೊಳಗಿನವರ ಬಾಲಕಿಯರ ಸಿಂಗಲ್ಸ್ ಫೈನಲ್‌ನಲ್ಲಿ ದೀಕ್ಷಾ ಸುಧಾಕರ್, ಭಾರತದವರೇ ಆದ ಲಕ್ಷ್ಯ ರಾಜೇಶ್ ಅವರನ್ನು ೨೧-೧೬, ೨೧-೯ ಸೆಟ್‌ಗಳಿಂದ ಸೋಲಿಸಿದರು. ಜೂನಿಯರ್ ಏಷ್ಯನ್ ಚಾಂಪಿಯನ್‌ಶಿಪ್‌ನ ೧೭ ವರ್ಷದೊಳಗಿನವರ ಬಾಲಕಿಯರ ಸಿಂಗಲ್ಸ್‌ನಲ್ಲಿ ಪದಕ ಗೆದ್ದ ಮೊದಲ ಭಾರತೀಯ ಆಟಗಾರ್ತಿ ಎಂಬ ಹೆಗ್ಗಳಿಕೆಗೆ ದೀಕ್ಷಾ ಪಾತ್ರರಾದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>